## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಬಿ.ಕೆ. ಸಂಶಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮತ್ತು ಶ್ರೀ ಐ.ಆರ್.ಜಾತಗೇರ, ದ್ವಿತೀಯ ದರ್ಜೆ ಲೆಕ್ಕ ಸಹಾಯಕರು, ಹುಲಗೂರ ಗ್ರಾಮ ಪಂಚಾಯಿತಿ, ಶಿಗ್ಗಾವಿ ತಾಲ್ಲೂಕು ಹಾವೇರಿ ಜಿಲ್ಲೆ ಇವರ ವಿರುದ್ದ ಲೋಕಾಯುಕ್ತ ವಿಚಾರಣೆ- ಅಂತಿಮ ಆದೇಶ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 703 ಗ್ರಾಪಂಕಾ 2016, ದಿನಾಂಕ: 10.03.2017.
2. ಅಪರ ನಿಬಂಧಕರು, ವಿಚಾರಣೆಗಳು-12, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರವರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ:UPLOK-1 / DE/396/2017/ARE-12, ದಿನಾಂಕ: 17.03.2021.
3. ಮಾನ್ಯ ಉಪ ಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: UPLOK-1 / DE/396/2017/ARE-12, ದಿನಾಂಕ:22.03.2021.
4. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ 53 ಗ್ರಾಪಂಕಾ 2021, ದಿ: 17.04.2021.
5. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್‌ಗೆ ಉತ್ತರ ನೀಡಲು ಕಾಲಾವಕಾಶ ಕೋರಿ ಸಲ್ಲಿಸಿದ ಮನವಿ ದಿನಾಂಕ:10.05.2021.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ ಶ್ರೀ ಬಿ.ಕೆ. ಸಂಶಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮತ್ತು ಶ್ರೀ ಐ.ಆರ್.ಜಾತಗೇರ, ದ್ವಿತೀಯ ದರ್ಜೆ ಲೆಕ್ಕ ಸಹಾಯಕರು, ಹುಲಗೂರ ಗ್ರಾಮ ಪಂಚಾಯಿತಿ, ಶಿಗ್ಗಾವಿ ತಾಲ್ಲೂಕು ಹಾವೇರಿ ಜಿಲ್ಲೆ ಇವರ ವಿರುದ್ದ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮವಳಿಗಳು 1957 ರ ನಿಯಮ 14-ಎ ರಡಿಯಲ್ಲಿ ಮಾನ್ಯ ಉಪ ಲೋಕಾಯುಕ್ತರಿಗೆ ವಹಿಸಲಾಗಿತ್ತು. ಅದರಂತೆ ಅಪರ ನಿಬಂಧಕರು ವಿಚಾರಣೆಗಳು-12, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ದ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

**" ದೋಷಾರೋಪಣೆ":-**

" 1) That you DGOs 1 and 2 named above, while working as such in Hulgur grama Panchayath, have received 984 applications during the period from 2009-10 to 2014-15 for grant of rations card and collected Rs. 49,200/- as application fees at Rs.50/- per application. Similarly having received 433 applications for grant of ration card during the period from 11.06.2015 to 09.12.2015 collected Rs. 21,650/- as application fees at Rs.50/- per application. But you have remitted only Rs.9840/- to to Grama Panchayath account, out of Rs.49,200/- collected along with 984 application during 2009 to 2015 and the balance of Rs.39,360/- has been misappropriated by you without remitting the said amount to the Grama Panchayath account.

2) As per the show cause notice dated 16.09.2015 issued by Executive Officer, Taluk Panchayath, Shoggaon, you the DGOs no.1 and 2 having collected Rs. 17,900/- towards application fee for issue of ration card from 358 applications at Rs.50/- per application, you have failed to remit the said amount to the Grama panchayath account and thus misappropriated the said amount.

3) Thus, you DGOs no.1 and 2 have failed to maintain absolute integrity, showed negligence and lack of devotion to duty and committed an act which is unbecoming of a Government Servant and thus you are guilty of misconduct under Rule 3(1)(i) to (iii) of KCS (Conduct) Rules 1966."

ಮೇಲೆ ಓದಲಾದ ಕ್ರಮ ಸಂಖ್ಯೆ (2) ಮತ್ತು (3) ರಲ್ಲಿ ಶ್ರೀ ಬಿ.ಕೆ. ಸಂಶಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮತ್ತು ಶ್ರೀ ಐ.ಆರ್.ಜಾತಗೇರ, ದ್ವಿತೀಯ ದರ್ಜೆ ಲೆಕ್ಕ ಸಹಾಯಕರು, ಹುಲಗೂರ ಗ್ರಾಮ ಪಂಚಾಯಿತಿ, ಶಿಗ್ಗಾವಿ ತಾಲ್ಲೂಕು ಹಾವೇರಿ ಜಿಲ್ಲೆ ಇವರ ವಿರುದ್ಧದ ಆಪಾದನೆಯನ್ನು ಭಾಗಶ: ರುಜುಮಾತುಪಡಿಸಲಾಗಿದೆ ಎಂದು ನಿರ್ಣಯಿಸಿರುತ್ತಾರೆ. ಈ ವರದಿಯನ್ನು ಮಾನ್ಯ ಉಪಲೋಕಾಯುಕ್ತರವರು ಅಂಗೀಕರಿಸಿ, ಶ್ರೀ ಬಿ.ಕೆ. ಸಂಶಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮತ್ತು ಶ್ರೀ ಐ.ಆರ್.ಜಾತಗೇರ, ದ್ವಿತೀಯ ದರ್ಜೆ ಲೆಕ್ಕ ಸಹಾಯಕರು, ಹುಲಗೂರ ಗ್ರಾಮ ಪಂಚಾಯಿತಿ ಇವರ ವಿರುದ್ದ ಸಾಬೀತಾಗಿರುವ ಆರೋಪಕ್ಕೆ ಅನುಗುಣವಾಗಿ ಸದರಿಯವರಿಗೆ " ಎರಡು (2) ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮ ಸಹಿತವಾಗಿ ತಡೆಹಿಡಿಯುವ ಮತ್ತು ತಲಾ ರೂ. 3,950/–ಗಳನ್ನು ಅವರ ವೇತನ ಮತ್ತು ಇತರೆ ಭತ್ಯೆಗಳಿಂದ ವಸೂಲಿ ಮಾಡುವ ದಂಡನೆಯನ್ನು" ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರಲ್ಲಿ ಶ್ರೀ ಬಿ.ಕೆ. ಸಂಶಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮತ್ತು ಶ್ರೀ ಐ.ಆರ್.ಜಾತಗೇರ, ದ್ವಿತೀಯ ದರ್ಜೆ ಲೆಕ್ಕ ಸಹಾಯಕರು, ಹುಲಗೂರ ಗ್ರಾಮ ಪಂಚಾಯಿತಿ, ಶಿಗ್ಗಾವಿ ತಾಲ್ಲೂಕು ಹಾವೇರಿ ಜಿಲ್ಲೆ ಇವರಿಗೆ ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತ ರವರ ಶಿಫಾರಸ್ಸಿನ ಪ್ರತಿಯೊಂದಿಗೆ 2ನೇ ಕಾರಣ ಕೇಳುವ ನೋಟೀಸ್‌ನ್ನು ಜಾರಿಗೊಳಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (5) ರಲ್ಲಿ 2ನೇ ಕಾರಣ ಕೇಳುವ ನೋಟೀಸಿಗೆ ಆಪಾದಿತ ನೌಕರರು ಲಿಖಿತ ಸಮಾಜಾಯಿಷಿಯನ್ನು ಸಲ್ಲಿಸಲು 10 ರಿಂದ 15 ದಿನಗಳ ಕಾಲಾವಕಾಶ ನೀಡುವಂತೆ ಕೋರಿರುತ್ತಾರೆ. ಆದರೆ ಸುಮಾರು 6 ತಿಂಗಳು ಮುಕ್ತಾಯಗೊಂಡರು ಸಹ ಯಾವುದೇ ಲಿಖಿತ ಸಮಜಾಯಿಷಿಯನ್ನು ಸಲ್ಲಿಸಿರುವುದಿಲ್ಲ.

ಈ ಪ್ರಕರಣದ ಬಗ್ಗೆ ಅಪರ ನಿಬಂಧಕರು ವಿಚಾರಣೆಗಳು–12, ಕರ್ನಾಟಕ ಲೋಕಾಯುಕ್ತರವರು ಇಲಾಖಾ ವಿಚಾರಣೆ ನಡೆಸಿ, ಸಲ್ಲಿಸಿರುವ ವಿಚಾರಣಾ ವರದಿಯಲ್ಲಿ ಆಪಾದಿತ ನೌಕರರ ವಿರುದ್ದ ಆರೋಪವು ಸಾಬೀತಾಗಿರುವುದಕ್ಕೆ ಸಂಬಂಧಿಸಿದಂತೆ ವಿವರವಾಗಿ ವರದಿಯಲ್ಲಿ ತಿಳಿಸಿರುತ್ತಾರೆ. ಮಾನ್ಯ ಉಪ ಲೋಕಾಯುಕ್ತರವರ ವಿಚಾರಣೆಯಲ್ಲಿಯೂ ಕೂಡ ಎದುರುದಾರರು ತಮ್ಮ ಮೇಲಿನ ಆರೋಪಗಳಲ್ಲಿ ಯಾವುದೇ ಹುರುಳಿಲ್ಲವೆಂದು ಸಮರ್ಥಿಸಿಕೊಳ್ಳಲು ವಿಫಲರಾಗಿರುತ್ತಾರೆ ಹಾಗೂ ವಿಚಾರಣಾಧಿಕಾರಿಯವರು ವಿವರವಾದ ಸಮರ್ಥನೆಯೊಂದಿಗೆ ಆರೋಪವನ್ನು ಸಾಬೀತುಪಡಿಸಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರವರು ವಿಚಾರಣಾ ವರದಿಯನ್ನು ಅಂಗೀಕರಿಸಿ, ಆರೋಪದ ತೀವ್ರತೆಗೆ ಅನುಗುಣವಾಗಿ ಶ್ರೀ ಬಿ.ಕೆ. ಸಂಶಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮತ್ತು ಶ್ರೀ ಐ.ಆರ್.ಜಾತಗೇರ, ದ್ವಿತೀಯ ದರ್ಜೆ ಲೆಕ್ಕ ಸಹಾಯಕರು, ಹುಲಗೂರ ಗ್ರಾಮ ಪಂಚಾಯಿತಿ, ಶಿಗ್ಗಾವಿ ತಾಲ್ಲೂಕು ಹಾವೇರಿ ಜಿಲ್ಲೆ ಇವರಿಗೆ " ಎರಡು (2) ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮ ಸಹಿತವಾಗಿ ತಡೆಹಿಡಿಯುವ ಮತ್ತು ತಲಾ ರೂ. 3,950/–ಗಳನ್ನು ಅವರ ವೇತನ ಮತ್ತು ಇತರೆ ಭತ್ಯೆಗಳಿಂದ ವಸೂಲಿ ಮಾಡುವ ದಂಡನೆಯನ್ನು " ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ.

ವಿಚಾರಣಾಧಿಕಾರಿಯವರು ಆಪಾದನೆಯನ್ನು ಸಾಬೀತುಪಡಿಸಲು ತಮ್ಮ ವರದಿಯಲ್ಲಿ ವಿವರವಾದ ಕಾರಣಗಳನ್ನು ನೀಡಿರುತ್ತಾರೆ. ಸದರಿ ಕಾರಣಗಳು ಸಮರ್ಥನೀಯವಾಗಿರುತ್ತದೆ. ಆದುದರಿಂದ, ಸರ್ಕಾರವು ವಿಚಾರಣಾ ವರದಿ ಹಾಗೂ ಮಾನ್ಯ ಉಪಲೋಕಾಯುಕ್ತರವರ ಶಿಫಾರಸ್ಸನ್ನು ಪರಿಶೀಲಿಸಿ, ಶ್ರೀ ಬಿ.ಕೆ. ಸಂಶಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮತ್ತು ಶ್ರೀ ಐ.ಆರ್.ಜಾತಗೇರ, ದ್ವಿತೀಯ ದರ್ಜೆ ಲೆಕ್ಕ ಸಹಾಯಕರು, ಹುಲಗೂರ ಗ್ರಾಮ ಪಂಚಾಯಿತಿ, ಶಿಗ್ಗಾವಿ ತಾಲ್ಲೂಕು ಹಾವೇರಿ ಜಿಲ್ಲೆ ಇವರಿಗೆ ಮಾನ್ಯ ಉಪಲೋಕಾಯುಕ್ತರವರು ಶಿಫಾರಸ್ಸು ಮಾಡಿರುವಂತೆ " ಎರಡು (2) ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮ ಸಹಿತವಾಗಿ ತಡೆಹಿಡಿಯುವ ಮತ್ತು ತಲಾ ರೂ. 3,950/–ಗಳನ್ನು ಅವರ ವೇತನ ಮತ್ತು ಇತರೆ ಭತ್ಯೆಗಳಿಂದ ವಸೂಲಿ ಮಾಡುವ ದಂಡನೆಯನ್ನು" ವಿಧಿಸಲು ನಿರ್ಣಯಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 53 ಗ್ರಾಪಂಕಾ 2021, ಬೆಂಗಳೂರು, ದಿನಾಂಕ:–24.02.2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಬಿ.ಕೆ. ಸಂಶಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮತ್ತು ಶ್ರೀ ಐ.ಆರ್.ಜಾತಗೇರ, ದ್ವಿತೀಯ ದರ್ಜೆ ಲೆಕ್ಕ ಸಹಾಯಕರು, ಹುಲಗೂರ ಗ್ರಾಮ ಪಂಚಾಯಿತಿ, ಶಿಗ್ಗಾವಿ ತಾಲ್ಲೂಕು, ಹಾವೇರಿ ಜಿಲ್ಲೆ ಇವರುಗಳ ವಿರುದ್ಧದ ಆರೋಪಗಳು ಸಾಬೀತಾಗಿರುವುದರಿಂದ ಇವರುಗಳಿಗೆ ಕರ್ನಾಟಕ ನಾಗರೀಕ ಸೇವಾ (ಸಿಸಿಎ) ನಿಯಮಾವಳಿಗಳು 1957 ನಿಯಮ 8 (iii) ರನ್ವಯ " ಎರಡು (2) ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮ ಸಹಿತವಾಗಿ ತಡೆಹಿಡಿಯುವ ಮತ್ತು ಸದರಿ ನಿಯಮದ 8(iv) ರಡಿ ತಲಾ ರೂ. 3,950/–ಗಳನ್ನು ಅವರ ವೇತನ ಮತ್ತು ಇತರೆ ಭತ್ಯೆಗಳಿಂದ ವಸೂಲಿ ಮಾಡುವ ದಂಡನೆ " (withholding two annual increments payable to DGO-1 Sri B K Samshi and DGO-2 Sri I.R Jathager with cumulative effct apart from recovering a sum of Rs. 3,950/- the pay and allowances payable to DGO-1 Sri B.K Samshi and DGO-2 I.R Jathager) ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

24/2/22

*(ರಾಜು ಎಂ.ಎಂ)*
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಅಪರ ನಿಬಂಧಕರು–12, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಹಾವೇರಿ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಶಿಗ್ಗಾವಿ, ಹಾವೇರಿ ಜಿಲ್ಲೆ.
   ಶ್ರೀ ಬಿ.ಕೆ. ಸಂಶಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮತ್ತು ಶ್ರೀ ಐ.ಆರ್.ಜಾತಗೇರ, ದ್ವಿತೀಯ ದರ್ಜೆ ಲೆಕ್ಕ ಸಹಾಯಕರು, ಹುಲಗೂರ ಗ್ರಾಮ ಪಂಚಾಯಿತಿ, ಶಿಗ್ಗಾವಿ ತಾಲ್ಲೂಕು ಹಾವೇರಿ ಜಿಲ್ಲೆ **(ಇವರಿಗೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್ ಶಿಗ್ಗಾವಿ, ಹಾವೇರಿ ಜಿಲ್ಲೆ ಇವರ ಮುಖಾಂತರ)**
6. ಗಣಕ ಕೋಶ, ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ/ಪ್ರತಿ.